# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 38(103) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ), |
| ಉತ್ತರಿಸುವ ದಿನಾಂಕ | : | 19/12/2022. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>1995ರಿಂದ 2000ನೇ ಸಾಲಿನವರೆಗೆ ಪ್ರಾರಂಭಗೊಂಡಿರುವ ಖಾಸಗಿ ಅನುದಾನರಹಿತ ಕನ್ನಡ ಮಾಧ್ಯಮ ಪ್ರೌಢಶಾಲೆ, ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;</td><td>1995ರಿಂದ 2000ರ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮದ ಖಾಸಗಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ವಿವರ:<br>
<table><tr><th>ಖಾಸಗಿ ಪ್ರೌಢಶಾಲೆಗಳು</th><th>ಖಾಸಗಿ ಪದವಿ ಪೂರ್ವ ಕಾಲೇಜುಗಳು</th></tr><tr><td>294</td><td>152</td></tr></table></td></tr>
<tr><td>ಆ)</td><td>ಸದರಿ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರರಿಗೆ ವೇತನಾನುದಾನ ಇಲ್ಲದೆ ಇರುವುದರಿಂದ ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ</td></tr>
<tr><td>ಇ)</td><td>ಸದರಿ ನೌಕರರಿಗೆ ವೇತನಾನುದಾನ ನೀಡಲು ಅಗತ್ಯವಿರುವ ಅನುದಾನದ ಮೊತ್ತವೆಷ್ಟು;</td><td>1995ರಿಂದ 2000ರ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮದ ಖಾಸಗಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸಹಾಯಾನುದಾನಕ್ಕೊಳಪಡಿಸಿದಲ್ಲಿ ಉಂಟಾಗುವ ವಾರ್ಷಿಕ ಅಂದಾಜು ವೆಚ್ಚದ ವಿವರ:<br>
<table><tr><th>ಖಾಸಗಿ ಪ್ರೌಢಶಾಲೆಗಳಿಗೆ (ರೂ.ಕೋಟಿಗಳಲ್ಲಿ)</th><th>ಖಾಸಗಿ ಪದವಿ ಪೂರ್ವ ಕಾಲೇಜುಗಳಿಗೆ (ರೂ.ಕೋಟಿಗಳಲ್ಲಿ</th><th>ಒಟ್ಟು ವಾರ್ಷಿಕ ಅಂದಾಜು ವೆಚ್ಚ (ರೂ.ಕೋಟಿಗಳಲ್ಲಿ)</th></tr><tr><td>118.98</td><td>132.76</td><td>251.74</td></tr></table></td></tr>
</table>

| | | |
|---|---|---|
| ಈ) | ಯಾವ ಕಾಲಮಿತಿಯಲ್ಲಿ ಅನುದಾನವನ್ನು ನೀಡಲಾಗುವುದು; | 1995ರ ನಂತರ ಪ್ರಾರಂಭವಾಗಿರುವ ಖಾಸಗಿ ಅನುದಾನರಹಿತ ಶಾಲೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸುವ ಹಾಗೂ ಅಂತಹ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಸರ್ಕಾರಿ ಶಾಲಾ ಮಕ್ಕಳಿಗೆ ನೀಡುವಂತೆ ಸರ್ಕಾರದಿಂದ ಉಚಿತ ಸೌಲಭ್ಯಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದಲ್ಲಿ ಇರುವುದಿಲ್ಲ. |
| ಉ) | ಸದರಿ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಆರ್ಥಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಶಾಲಾ ಮಕ್ಕಳಿಗೆ ನೀಡುವಂತೆ ಸರ್ಕಾರದಿಂದ ಉಚಿತ ಸೌಲಭ್ಯಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಇಪಿ 618 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು